ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-560001

ಸಂ: ಸಿ7(1)(2) ಪ್ರಾಶಿಅ/ಇತರೆ/2010-11 ದಿನಾಂಕ: 25.02.2011

**ಸುತ್ತೋಲೆ**

ವಿಷಯ: ಖಾಸಗಿ ಪೂರ್ವಪ್ರಾಥಮಿಕ, ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಮಕ್ಕಳ ದಾಖಲಾತಿ ಪ್ರಕ್ರಿಯೆಯನ್ನು ಪ್ರತಿವರ್ಷದ ಏಪ್ರಿಲ್ ಮಾಹೆಯಲ್ಲಿಯೇ ಪ್ರಾರಂಭಿಸುವ ಬಗ್ಗೆ.

ಉಲ್ಲೇಖ: ಈ ಕಛೇರಿ ಸುತ್ತೋಲೆ ಸಂ:ಸಿ7(1)ಪ್ರಾಶಿಅ/ಇತರೆ-45/2005-06, ದಿನಾಂಕ:30.11.2005, ಮತ್ತು 07.02.2006.

- HKTK --

ವಿಷಯಕ್ಕೆ ಸಂಬಂಧಿಸಿದಂತೆ ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಮಕ್ಕಳ ದಾಖಲಾತಿ ಮಾಡುವಾಗ ಕರ್ನಾಟಕ ಶಿಕ್ಷಣ ಅಧಿನಿಯಮ 1983ರ ಸೆಕ್ಷನ್ 47ರ ಅನ್ವಯ, ಜಾರಿಯಲ್ಲಿರುವ ನಿಯಮಗಳ ಪ್ರಕಾರ ಮಾಡತಕ್ಕದ್ದು, ಕರ್ನಾಟಕ ಶಿಕ್ಷಣ ಸಂಸ್ಥೆಗಳು (ವರ್ಗೀಕರಣ, ನಿಯಂತ್ರಣ ಮತ್ತು ಪಠ್ಯಕ್ರಮ ನಿಗಧೀಕರಣ ಇತ್ಯಾದಿ) ನಿಯಮಗಳು 1995ರ ನಯಮ 14ರ ಅನ್ವಯ ನಿಗಧಿಪಡಿಸಿರುವ ಕಾರ್ಯವಿಧಾನವನ್ನು ಅನುಸರಿಸಿ ಶಿಕ್ಷಣ ಸಂಸ್ಥೆಗಳಲ್ಲಿ ಮಕ್ಕಳ ದಾಖಲಾತಿಯನ್ನು ಮುಕ್ತ ಹಾಗೂ ಪಾರದರ್ಶಕ ವಾಗಿ ಮಾಡತಕ್ಕದ್ದು,

ಸದರಿ ನಿಯಮದ ಉಪನಿಯಮ (7) ರಲ್ಲಿ ವಿವರಿಸಲಾಗಿರುವಂತೆ ದಾಖಲಾತಿ ಪ್ರಕ್ರಿಯೆಗಳನ್ನು ಪ್ರತಿವರ್ಷದ ಏಪ್ರಿಲ್ ತಿಂಗಳಿನಲ್ಲಿ ಪ್ರಾರಂಭಿಸತಕ್ಕದ್ದು ಹೀಗೆ ದಾಖಲಾತಿ ಪ್ರಕ್ರಿಯೆ ಆರಂಭಿಸುವ ಮುನ್ನ ಶಾಲಾ ಆಡಳಿತ ಮಂಡಳಿಗಳು ದಾಖಲಾತಿ ಪ್ರಕ್ರಿಯೆಗೆ ಸಂಬಂಧಿಸಿದಂತೆ ಹಂತವಾರು ಘಟನಾವಳಿಗಳ ಪೂರ್ಣವಿವರಗಳು ಅಂದರೆ ಅರ್ಜಿಗಳನ್ನು ವಿತರಿಸುವ ದಿನಾಂಕ, ಅರ್ಜಿಗಳನ್ನು ಸ್ವೀಕರಿಸಲು ನಿಗಧಿಪಡಿಸಿರುವ ಅಂತಿಮ ದಿನಾಂಕ, ಆಯ್ಕೆಗೊಂಡ ವಿದ್ಯಾರ್ಥಿಗಳ ಪಟ್ಟಿ ಪ್ರಕಟಿಸುವ ದಿನಾಂಕ ಮತ್ತು ದಾಖಲಾತಿಗೆ ನಿಗಧಿಪಡಿಸಿರುವ ಅಂತಿಮ ದಿನಾಂಕ ಮುಂತಾದ ವಿವರಗಳನ್ನು ಪ್ರತಿ ಶಾಲೆಯಲ್ಲೂ ನೋಟೀಸ್ ಬೋರ್ಡ್‌ನ ಮೇಲೆ ಕಡ್ಡಾಯವಾಗಿ ಪ್ರದರ್ಶಿಸಿರಬೇಕು. ಮತ್ತು ಹೀಗೆ ದಾಖಲಾತಿ ಬಗ್ಗೆ ಶಾಲಾ ಆಡಳಿತ ಮಂಡಳಿ ಕೈಗೊಂಡ ಕ್ರಮಗಳ ವಿವರವನ್ನೊಳಗೊಂಡ ದಾಖಲೆಗಳನ್ನು ಸಂಸ್ಥೆಯ ಮುಖ್ಯಸ್ಥರು ಇಲಾಖಾ ಅಧಿಕಾರಿಗಳ ಭೇಟಿ/ತಪಾಸಣೆ ಸಂದರ್ಭದಲ್ಲಿ ಹಾಜರುಪಡಿಸುವುದು ಸಂಸ್ಥೆಯ ಮುಖ್ಯಸ್ಥರ ಜವಾಬ್ದಾರಿ ಆಗಿರುತ್ತದೆ. ಇಲಾಖಾ ಅಧಿಕಾರಿಗಳ ತಪಾಸಣೆ ಸಂದರ್ಭದಲ್ಲಿ ಈ ಪ್ರಕ್ರಿಯೆಯಲ್ಲಿ ಯಾವುದೇ ಲೋಪದೋಷ ಅಥವಾ ನಿಯಮಗಳ ಉಲ್ಲಂಘನೆ ಕಂಡುಬಂದಲ್ಲಿ ಕೂಡಲೇ ತಮ್ಮ ಜಿಲ್ಲೆಯ "District level Education Regulating authority" ಗೆ ವರದಿ ಮಾಡತಕ್ಕದ್ದು,

ಈ ಬಗ್ಗೆ ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರು ತಮ್ಮ ವ್ಯಾಪ್ತಿಗೆ ಬರುವ ಖಾಸಗಿ ಶಾಲಾ ಆಡಳಿತ ಮಂಡಳಿಗಳಿಗೆ ತುರ್ತಾಗಿ ಈ ಬಗ್ಗೆ ಸುತ್ತೋಲೆ ಹೊರಡಿಸಿ ಕಟ್ಟುನಿಟ್ಟಾಗಿ ನಿಯಮಗಳನ್ನು ಪಾಲಿಸುವ ಬಗ್ಗೆ ತಿಳುವಳಿಕೆ ನೀಡುವುದು, ಮತ್ತು ಈ ಬಗ್ಗೆ ಸಾರ್ವಜನಿಕರ ಗಮನಕ್ಕೆ ಬರುವಂತೆ ಸಾಕಷ್ಟು ಪ್ರಚಾರವನ್ನು ಮಾಡುವುದು. ಮತ್ತು ನಿಮ್ಮ ವ್ಯಾಪ್ತಿಯಲ್ಲಿ ಬರುವ ಶಾಲೆಗಳಿಗೆ ಭೇಟಿನೀಡಿ ದಾಖಲಾತಿ ಪ್ರಕ್ರಿಯೆಗಳ ಬಗ್ಗೆ ಕೈಗೊಂಡಿರುವ ಕ್ರಮಗಳು ಮತ್ತು ದಾಖಲಾತಿಯನ್ನು ಪಾರದರ್ಶಕವಾಗಿ ಮಾಡುವ ಬಗ್ಗೆ ಅನುಪಾಲಿಸಿ ವರದಿಯನ್ನು ಸಂಗ್ರಹಿಸಲು ಸೂಚಿಸಿದೆ.

(ಎ.ದೇವಪ್ರಕಾಶ್)
ನಿರ್ದೇಶಕರು (ಪ್ರಾಥಮಿಕ ಶಿಕ್ಷಣ)

ಪ್ರತಿ:

1. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ.
2. ರಾಜ್ಯದಲ್ಲಿನ ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳಿಗೆ ಸೂಕ್ತಕ್ರಮಕ್ಕಾಗಿ
3. ರಾಜ್ಯದಲ್ಲಿನ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಅಗತ್ಯ ಕ್ರಮಕ್ಕಾಗಿ
4. ಎಲ್ಲಾ ಜಿಲ್ಲಾಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಮಾಹಿತಿಗಾಗಿ
5. ಸರ್ಕಾರದ ಕಾರ್ಯದರ್ಶಿಯವರು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ಮಾಹಿತಿಗಾಗಿ.
6. ನಿರ್ದೇಶಕರು ಪ್ರಾ.ಶಿ/ ಪ್ರೌ..ಶಿ/ ಭಾಷಾ ಅಲ್ಪಸಂಖ್ಯಾತ ಶಾಲೆಗಳು/ಆಯುಕ್ತರ ಕಛೇರಿ, ಬೆಂಗಳೂರು.
7. ಅಪರ ಆಯುಕ್ತರು, ಸಾ.ಸಿ.ಇ. ಧಾರವಾಡ, ಮತ್ತು ಗುಲ್ಬರ್ಗಾ, ಇವರಿಗೆ ಮಾಹಿತಿ ಮತ್ತು ಸೂಕ್ತ ಕ್ರಮಕ್ಕಾಗಿ.
8. ರಾಜ್ಯದಲ್ಲಿನ ಎಲ್ಲಾ ಸಹನಿರ್ದೇಶಕರುಗಳಿಗೆ ಮಾಹಿತಿಗಾಗಿ,
9. ಅನುದಾನ ಶಾಖೆ, ಪ್ರಾಥಮಿಕ/ಪ್ರೌಢ ಶಿಕ್ಷಣ ಎಲ್ಲಾ ಕಾರ್ಯನಿರ್ವಾಹಕರುಗಳಿಗೆ ಮಾಹಿತಿಗಾಗಿ
10. ಕ.ಪ್ರ.